**Bangalore**
**Regional News**
**01.03.2026 / 6.40 p.m.**
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಮಧ್ಯಪ್ರಾಚ್ಯ, ಕೊಲ್ಲಿ ರಾಷ್ಟ್ರಗಳಲ್ಲಿ ಸಿಲುಕಿರುವ ಕನ್ನಡಿಗರೊಂದಿಗೆ ಸರ್ಕಾರ ನಿರಂತರ ಸಂಪರ್ಕ - ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ

೨. ಪಶ್ಚಿಮ ಏಷ್ಯಾಗೆ ಪ್ರಯಾಣಿಸುವ ೩೫೦ ವಿಮಾನಗಳನ್ನು ರದ್ದುಪಡಿಸಿದ ಸಚಿವಾಲಯ - ವಿದೇಶಾಂಗ ಇಲಾಖೆಯಿಂದ ಸಹಾಯವಾಣಿ ಆರಂಭ

೩. ಆಲಮಟ್ಟಿ ಅಣೆಕಟ್ಟಿನ ಎತ್ತರವನ್ನು ೫೨೪ ಮೀಟರ್‌ಗೆ ಏರಿಸಲು ಸರ್ಕಾರ ಬದ್ಧ - ಸಚಿವ ಎಂ.ಬಿ.ಪಾಟೀಲ್

೪. ಕೈಗಾ ಅಣುಸ್ಥಾವರದ ೫ ಮತ್ತು ೬ನೇ ಘಟಕ ಸಂಪೂರ್ಣ ಸ್ವದೇಶಿ ನಿರ್ಮಿತ - ಅಣುಶಕ್ತಿ ಆಯೋಗದ ಅಧ್ಯಕ್ಷ ಡಾ.ಅಜಿತ್‌ಕುಮಾರ್ ಮೊಹಂತಿ ಮಾಹಿತಿ

****************

ಅರಬ್ ಹಾಗೂ ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿ ಸಿಲುಕಿರುವ ಕನ್ನಡಿಗರಿಗೆ ತೊಂದರೆಯಾಗದಂತೆ ಕರೆ ತರಲು ಪ್ರಯತ್ನ ನಡೆಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ವಿದೇಶಾಂಗ ಸಚಿವಾಲಯದೊಂದಿಗೆ ನಿರಂತರವಾಗಿ ಸಂಪರ್ಕದಲ್ಲಿದ್ದು, ದುಬೈನಲ್ಲಿರುವ ಭಾರತೀಯರು ಸುರಕ್ಷಿತವಾಗಿದ್ದಾರೆ ಎಂದು ಹೇಳಿದ್ದಾರೆ.

ಇದೇ ವೇಳೆ ಅಮೆರಿಕ, ಇರಾನ್ ಮೇಲೆ ನಡೆಸಿರುವ ದಾಳಿಯನ್ನು ಖಂಡಿಸಿರುವ ಅವರು, ಈ ಯುದ್ಧ ಅಗತ್ಯವಿರಲಿಲ್ಲ ಎಂದು ಹೇಳಿದ್ದಾರೆ. ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ದ್ವಂದ್ವ ನೀತಿ ಅನುಸರಿಸುತ್ತಿದ್ದು, ಇರಾನ್ ಅಧ್ಯಕ್ಷ ಖಮೇನಿ ಹತ್ಯೆ ಖಂಡನೀಯ ಎಂದು ತಿಳಿಸಿದ್ದಾರೆ.

ಈ ನಡುವೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಇಸ್ರೇಲ್, ಇರಾನ್ ನಡುವಿನ ಉದ್ವಿಘ್ನ ಪರಿಸ್ಥಿತಿಯಿಂದಾಗಿ ದುಬೈನಲ್ಲಿ ಸಿಲುಕಿರುವ ಕನ್ನಡಿಗರ ಜೊತೆ ಮಾತನಾಡಿ, ಧೈರ್ಯ ತುಂಬಲಾಗಿದೆ ಎಂದು ಹೇಳಿದ್ದಾರೆ.

ಯಾರೂ ಆತಂಕಕ್ಕೆ ಒಳಗಾಗುವ ಅಗತ್ಯವಿಲ್ಲ, ಪ್ರತಿಯೊಬ್ಬರನ್ನು ಸುರಕ್ಷಿತವಾಗಿ ತಾಯ್ನಾಡಿಗೆ ಕರೆ ತರಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

****************

ಅಮೆರಿಕ, ಇಸ್ರೇಲ್, ಇರಾನ್‌ನ ಶಾಲೆಯ ಮೇಲೆ ವೈಮಾನಿಕ ದಾಳಿ ನಡೆಸಿರುವುದು ಖಂಡನೀಯ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಭಿಪ್ರಾಯಪಟ್ಟಿದ್ದಾರೆ.

ಬಾಳೆಹೊನ್ನೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಪಂಚದಲ್ಲಿ ಶಾಂತಿ ನೆಲೆಸಬೇಕು, ಮಾನವ ಧರ್ಮಕ್ಕೆ ಜಯವಾಗಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ.

ಈ ಸಂಘರ್ಷಗಳಿಂದಾಗಿ ಭಾರತಕ್ಕೂ ಅಪಾಯ ಕಟ್ಟಿಟ್ಟ ಬುತ್ತಿ ಎಂದು ತಿಳಿಸಿದ್ದಾರೆ.

****************

ಇರಾನ್-ಇಸ್ರೇಲ್ ಸಂಘರ್ಷದಿಂದಾಗಿ ಮಧ್ಯಪ್ರಾಚ್ಯ ಮತ್ತು ಕೊಲ್ಲಿ ದೇಶಗಳಲ್ಲಿ ನೆಲೆಸಿರುವ ಕನ್ನಡಿಗರೂ ಸೇರಿದಂತೆ ಭಾರತೀಯರು ಭಯ ಭೀತರಾಗಿದ್ದಾರೆ. ಈ ದೇಶಗಳಲ್ಲಿ ರಾಜ್ಯದ ಹಲವರು ಸಿಲುಕಿಕೊಂಡಿರುವ ಬಗ್ಗೆ ಮಾಹಿತಿ ಲಭ್ಯವಾಗಿದ್ದು, ಸಂತ್ರಸ್ಥರಿಗಾಗಿ ವಿದೇಶಾಂಗ ಇಲಾಖೆ ಸಹಾಯವಾಣಿ ಆರಂಭಿಸಿದೆ.

ಇರಾನ್ ಸಹಾಯವಾಣಿ ಸಂಖ್ಯೆ : ೯೮೯೧೨-೮೧೦೯೧೧೫ / ೯೮೯೧೨-೮೧೦೯೧೦೯ / ೯೮೯೧೨-೮೧೦೯೧೦೨ ಕ್ಕೆ ಕರೆ ಮಾಡಬಹುದಾಗಿದೆ.

ಯುಎಇ: ಟೋಲ್ ಫ್ರಿ ಸಂಖ್ಯೆ : ೮೦೦೪೬೩೪೨, ವಾಟ್ಸ್‌ಪ್‌ಸಂಖ್ಯೆ : ೯೭೧೫೪೩೦೯೦೫೭೧

ಸೌದಿ ಅರೇಬಿಯಾ: ಟೋಲ್ ಫ್ರಿ ಸಂಖ್ಯೆ : ೮೦೦೨೪೭೧೨೩೪

ಕತಾರ್: ೦೦೯೭೪-೫೫೬೪೭೫೦೨

ಬಹ್ರೇನ್: ೦೦೯೭೩-೩೯೪೧೮೦೭೧

ಜೋರ್ಡಾನ್: ೦೦೯೬೨-೭೭೦ ೪೨೨ ೨೭೬

ಓಮನ್: ೮೦೦೭ ೧೨೩೪ / ವಾಟ್ಸಾಪ್ ಸಂ: ೯೬೮ ೯೮೨೮ ೨೨೭೦,

ಇರಾಕ್: ೯೬೪ ೭೭೧ ೬೫೧ / ೧೧೮೫ / ೯೬೪ ೭೭೦ ೪೪೪, ೪೮೯೯

ಕುವೈತ್: ೯೬೫ ೬೫೫೦೧೯೪೬

ಪ್ಯಾಲೆಸ್ಟೀನ್ : ೯೭೦ ೫೯೨೯೧೬೪೧೮ ಈ ಸಂಖ್ಯೆಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಮುಖ್ಯಮಂತ್ರಿ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

****************

ಪಶ್ಚಿಮ ಏಷ್ಯಾದಲ್ಲಿ ಬಿಕ್ಕಟ್ಟು ಉಂಟಾಗಿರುವ ಹಿನ್ನೆಲೆಯಲ್ಲಿ ಭಾರತೀಯ ವಿಮಾನಯಾನ ಸಂಸ್ಥೆಗಳು ನಿರ್ವಹಿಸುವ ಒಟ್ಟು ೩೫೦ ವಿಮಾನಗಳನ್ನು ರದ್ದುಪಡಿಸಲಾಗಿದೆ.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಈ ಬಗ್ಗೆ ಮಾಹಿತಿ ಹಂಚಿಕೊಂಡಿರುವ ನಾಗರಿಕ ವಿಮಾನಯಾನ ಸಚಿವಾಲಯ ಪ್ರಯಾಣಿಕರು ಸಂಬಂಧಪಟ್ಟ ವಿಮಾನಯಾನ ಸಂಸ್ಥೆಗಳೊಂದಿಗೆ ತಮ್ಮ ವಿಮಾನದ ಸ್ಥಿತಿಯನ್ನು ಪರಿಶೀಲಿಸುವಂತೆ ಸಲಹೆ ನೀಡಿದೆ.

ಪರಿಸ್ಥಿತಿಯನ್ನು ಪೂರ್ವಭಾವಿಯಾಗಿ ಮೇಲ್ವಿಚಾರಣೆ ಮಾಡಲು ಮತ್ತು ಪ್ರಯಾಣಿಕರಿಗೆ ಸಹಾಯ ಮಾಡಲು ಸಚಿವಾಲಯ ವಿಮಾನಯಾನ ಸಂಸ್ಥೆಗಳು, ವಿಮಾನ ನಿಲ್ದಾಣ ನಿರ್ವಾಹಕರು ಮತ್ತು ಇತರ ಪಾಲುದಾರರೊಂದಿಗೆ ಸಮನ್ವಯ ಸಾಧಿಸುತ್ತಿದೆ ಎಂದು ಸ್ಪಷ್ಟಪಡಿಸಿದೆ.

****************

ಕೃಷ್ಣ ಮೇಲ್ದಂಡೆಯ ೩ನೇ ಹಂತದ ಯೋಜನೆ ಅನುಷ್ಠಾನಕ್ಕೆ ಸರ್ಕಾರ ಬದ್ಧವಾಗಿದೆ ಎಂದು ಬೃಹತ್ ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವ ಡಾ.ಎಂ.ಬಿ.ಪಾಟೀಲ್ ತಿಳಿಸಿದ್ದಾರೆ.

ಆಲಮಟ್ಟಿಯಲ್ಲಿ ನಿರ್ಮಾಣವಾದ ಜಲ ಮನೋರಂಜನಾ ಉದ್ಯಾನವನ ಉದ್ಘಾಟಿಸಿ ಮಾತನಾಡಿದ ಅವರು, ಯಾವುದೇ ಕಾರಣಕ್ಕೂ ಯೋಜನೆಯನ್ನು ಮುಂದೂಡುವುದಿಲ್ಲ ಎಂದು ಹೇಳಿದ್ದಾರೆ.

ಅಣೆಕಟ್ಟಿನ ಎತ್ತರವನ್ನು ೫೨೪ ಮೀಟರ್‌ಗೆ ಏರಿಸಲು ಸರ್ಕಾರ ಬದ್ಧವಾಗಿದೆ. ಈ ಮೂಲಕ ಈ ಭಾಗದ ಜನರಿಗೆ ಸರ್ಕಾರ ನ್ಯಾಯ ಒದಗಿಸಲಿದೆ ಎಂದು ಭರವಸೆ ನೀಡಿದ್ದಾರೆ.

ಇದೇ ವೇಳೆ ಮಾತನಾಡಿದ ಸಕ್ಕರೆ ಸಚಿವ ಶಿವಾನಂದ ಪಾಟೀಲ್, ಕೇಂದ್ರ ಹಾಗೂ ರಾಜ್ಯ ಸರ್ಕಾರ ಕೃಷ್ಣ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸಬೇಕೆಂದು

ಒತ್ತಾಯಿಸಿದರು. ಆಲಮಟ್ಟಿ ಕೇವಲ ಕರ್ನಾಟಕದ ಯೋಜನೆಯಲ್ಲ ೪ ರಾಜ್ಯಗಳಿಗೆ ಶಕ್ತಿ ತುಂಬುವ ಬೃಹತ್ ಯೋಜನೆ ಎಂದು ಹೇಳಿದ್ದಾರೆ.

****************

ಕೈಗಾದಲ್ಲಿ ನಿರ್ಮಾಣವಾಗುತ್ತಿರುವ ಅಣುಸ್ಥಾವರದ ೫ ಮತ್ತು ೬ನೇ ಘಟಕಗಳು ಸಂಪೂರ್ಣ ಸ್ವದೇಶಿ ನಿರ್ಮಿತ ತಂತ್ರಜ್ಞಾನ ಹೊಂದಿವೆ ಎಂದು ಅಣುಶಕ್ತಿ ಇಲಾಖೆಯ ಕಾರ್ಯದರ್ಶಿ ಹಾಗೂ ಅಣುಶಕ್ತಿ ಆಯೋಗದ ಅಧ್ಯಕ್ಷ ಡಾ. ಅಜಿತ್ ಕುಮಾರ್ ಮೊಹಂತಿ ತಿಳಿಸಿದ್ದಾರೆ.

ದೇಶದ ಪ್ರಮುಖ ಅಣು ವಿದ್ಯುತ್ ಉತ್ಪಾದನಾ ಘಟಕ ಕೈಗಾದಲ್ಲಿ ೨೧ ಸಾವಿರ ಕೋಟಿ ವೆಚ್ಚದಲ್ಲಿನ ೫ ಮತ್ತು ೬ ನೇ ಘಟಕಗಳ ನಿರ್ಮಾಣ ಕಾರ್ಯದ ನೆಲ ಮಹಡಿ ಕಾಂಕ್ರೀಟೀಕರಣಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ೨೦೪೭ರ ವೇಳೆಗೆ ಭಾರತ ೧೦೦ ಗಿಗಾ ವ್ಯಾಟ್ ವಿದ್ಯುತ್ ಉತ್ಪಾದನಾ ಗುರಿ ಹೊಂದಿದೆ ಎಂದು ತಿಳಿಸಿದ್ದಾರೆ.

ಇದರಲ್ಲಿ ಅಣುಶಕ್ತಿ ಪಾಲು ಶೇಕಡ ೫೩ ರಷ್ಟು ಇರಲಿದೆ ಎಂದು ಹೇಳಿದ್ದಾರೆ. ೫ ಮತ್ತು ೬ ನೇ ಘಟಕಗಳು ನಿರ್ಣಾಯಕ ಮೈಲುಗಲ್ಲಾಗಿದ್ದು, ಮುಂದಿನ ೬೦ ತಿಂಗಳಲ್ಲಿ ಈ ಘಟಕಗಳಿಂದ ವಿದ್ಯುತ್ ಉತ್ಪಾದನಾ ಗುರಿ ಹೊಂದಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

****************

ಯುವಜನರು ಮಾದಕ ವ್ಯಸನದಿಂದ ದೂರವಿದ್ದರೆ ಆರೋಗ್ಯವಂತ ಸಮಾಜ ನಿರ್ಮಿಸಬಹುದು ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ ಅಭಿಪ್ರಾಯಪಟ್ಟಿದ್ದಾರೆ. ಮಂಡ್ಯ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಮೆಗಾ ಮ್ಯಾರಾಥಾನ್-೨೦೨೬ ಜಾಗೃತಿಗಾಗಿ, ಶಕ್ತಿಗಾಗಿ, ನಶೆ ಮುಕ್ತ ಮಂಡ್ಯಕ್ಕಾಗಿ ಕಾರ್ಯಕ್ರಮಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಾದಕವಸ್ತು ವಿಶ್ವದ ಪ್ರತಿಯೊಂದು ದೇಶದ ಯುವಜನತೆಯ ಮೇಲೆ ಪರಿಣಾಮ ಬೀರುತ್ತಿದೆ ಎಂದು ತಿಳಿಸಿದ್ದಾರೆ. ಯುವಜನತೆಯು ಕ್ಷಣಿಕ ಸುಖಕ್ಕೆ ತಮ್ಮ ಸುಖಜೀವನವನ್ನು ಕಳೆದುಕೊಳ್ಳಬೇಡಿ ಎಂದು ಕರೆ ನೀಡಿದ್ದಾರೆ. ಮನಸ್ಸು ವ್ಯಸನದಿಂದ ಮುಕ್ತವಾದರೆ ಮಾತ್ರ ವ್ಯಸನ ಮುಕ್ತ ಸಮಾಜ ನಿರ್ಮಿಸಲು ಸಾಧ್ಯ ಎಂದು ಹೇಳಿದ್ದಾರೆ.

"ನಮ್ಮ ಪೊಲೀಸ್, ನಮ್ಮ ಹೆಮ್ಮೆ", "ಎಲ್ಲರಿಗೂ ಫಿಟ್‌ನೆಸ್", "ಡ್ರಗ್ಸ್ ಮುಕ್ತ ಕರ್ನಾಟಕ ಮತ್ತು ಸೈಬರ್ ಅಪರಾಧದ ಕುರಿತು ಜಾಗೃತಿ ಮೂಡಿಸುವ ಸಲುವಾಗಿ ಹಾಸನದಲ್ಲಿ ಮ್ಯಾರಥಾನ್ ಗೆ

ಸಂಸದ ಶ್ರೇಯಸ್ ಪಟೇಲ್, ಶಾಸಕ ಸ್ವರೂಪ್ ಪ್ರಕಾಶ್ ಹಾಗೂ ಎಸ್ಪಿ ಶುಭನ್ವಿತ ಚಾಲನೆ ನೀಡಿದರು.

ಸೌಹಾರ್ದತೆ, ಶಾಂತಿ, ಭಾವೈಕ್ಯತೆಯ ಸಂದೇಶವನ್ನು ಸಾರುವ ಉದ್ದೇಶದಿಂದ ಬಾಗಲಕೋಟೆಯಲ್ಲಿ ಹಮ್ಮಿಕೊಂಡ ೫ಕೆ ಮ್ಯಾರಥಾನ್‌ಗೆ ಜಿಲ್ಲಾಧಿಕಾರಿ ಸಂಗಪ್ಪ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್ ಜಂಟಿಯಾಗಿ ಚಾಲನೆ ನೀಡಿದರು.

****************

ಕಥೆ, ಕಾದಂಬರಿ, ಕವನ, ನಾಟಕ ಸೇರಿದಂತೆ ಹಲವು ಸಾಹಿತ್ಯ ಪ್ರಕಾರಗಳಿಂದ ಪರಿಚಿತರಾಗಿದ್ದ ಹಿರಿಯ ಸಾಹಿತಿ ಬಿ.ಸಿದ್ದಲಿಂಗಸ್ವಾಮಿ ನಿಧನರಾಗಿದ್ದಾರೆ. ಅವರಿಗೆ ೮೪ ವರ್ಷ ವಯಸ್ಸಾಗಿತ್ತು.

ಆಕಾಶವಾಣಿಯಲ್ಲಿ ಕಾರ್ಯಕ್ರಮ ನಿರ್ವಾಹಕರಾಗಿದ್ದ ಸ್ವಾಮಿಯವರು, ಶರಣ ಸಾಹಿತ್ಯ, ಜೈನ ಸಾಹಿತ್ಯ, ಪ್ರವಾಸ ಕಥನ, ಜಾನಪದ ಸಾಹಿತ್ಯ, ಮಕ್ಕಳ ಸಾಹಿತ್ಯ ರಚಿಸಿ ವಿವಿಧ ಪ್ರಶಸ್ತಿಗಳಿಗೆ ಭಾಜನರಾಗಿದ್ದರು.

****************

ಪವಿತ್ರ ನದಿಗಳಾದ ಗಂಗೆ ಮತ್ತು ಸರಸ್ವತಿ ನೀಡುವ ಮುಕ್ತಿಯನ್ನು ಸಂಗೀತವು ಅತ್ಯಂತ ಸುಲಭವಾಗಿ ನೀಡಬಲ್ಲದು ಎಂದು ಪ್ರಖ್ಯಾತ ವಿದ್ವಾಂಸ ಪ್ರತಿಷ್ಠಿತ ಪದ್ಮ ಭೂಷಣ ಪ್ರಶಸ್ತಿಗೆ ಭಾಜನರಾಗಿರುವ ಶತಾವಧಾನಿ ಡಾ. ಆರ್. ಗಣೇಶ್ ತಿಳಿಸಿದ್ದಾರೆ.

ರವೀಂದ್ರ ಕಲಾಕ್ಷೇತ್ರದಲ್ಲಿ ಗಾಯನಾಚಾರ್ಯ ಗುರುರಾವ್ ದೇಶಪಾಂಡೆ - ಪಂಡಿತ್ ಭೀಮಸೇನ್ ಜೋಶಿ ಸ್ಮರಣಾರ್ಥ ನಡೆದ ೪೧ನೇ 'ಅಹೋರಾತ್ರಿ ಸಂಗೀತ ಮಹೋತ್ಸವ'ವನ್ನು ಉದ್ಘಾಟಿಸಿ ಮಾತನಾಡಿದ ಅವರು, ನಾದದ ಆರಾಧನೆಯು ನಮ್ಮನ್ನು ನೇರವಾಗಿ ದೇವರ ಸನ್ನಿಧಿಗೆ ತಲುಪಿಸುವ ಶಕ್ತಿ ಹೊಂದಿದೆ ಎಂದು ಹೇಳಿದ್ದಾರೆ.

ಕಾರ್ಯಕ್ರಮದಲ್ಲಿ ತಬಲಾ ವಾದಕ ಪಂಡಿತ್ ಯೋಗೇಶ್ ಸಂಸಿ ಅವರಿಗೆ "ಗುರುಗಂಧರ್ವ" ರಾಷ್ಟ್ರೀಯ ಪ್ರಶಸ್ತಿ ನೀಡಿ ಗೌರವಿಸಲಾಯಿತು.

********ಮುಕ್ತಾಯ********